ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	630(642)
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀ ಹೆಚ್ ಎಂ.ರಮೇಶಗೌಡ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ	:	05-03-2021
ಉತ್ತರಿಸುವವರು	:	ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	'ಮಿಷನ್ ಅಂತ್ಯೋದಯ' ಮತ್ತು "ಜನರ ಯೋಜನೆ ಜನರ ಅಭಿವೃದ್ಧಿ" ಹಾಗೂ 2020-2021ರ "ನಮ್ಮ ಗ್ರಾಮ ನಮ್ಮ ಯೋಜನೆ" ಕಾರ್ಯಕ್ರಮಕ್ಕೆ ಮೀಸಲಿಟ್ಟ ಹಣವೆಷ್ಟು; (ಮಾಹಿತಿ ನೀಡುವುದು)	ಮಿಶನ್ ಅಂತ್ಯೋದಯ ಮತ್ತು ಜನರ ಯೋಜನೆ ಜನರ ಅಭಿವೃದ್ಧಿ ತರಬೇತಿ ಕಾರ್ಯಕ್ರಮಗಳಿಗಾಗಿ 2020-21 ರಲ್ಲಿ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ಒಟ್ಟು 257149 ಶಿಭಿರಾರ್ಥಿಗಳಿಗೆ ರೂ. 7.98 ಕೋಟಿಗಳನ್ನು ಮೀಸಲಿಟ್ಟಿರುತ್ತದೆ.
(ಆ)	ಈ ಸಂಬಂಧ ನೋಡೆಲ್ ಅಧಿಕಾರಿಗಳು ಮತ್ತು ಮೇಲ್ವಿಚಾರಣಾ ಅಧಿಕಾರಿಗಳ ತರಬೇತಿ ಪೂರ್ಣವಾಗಿದೆಯೇ; ಪೂರ್ಣಗೊಂಡಿದ್ದಲ್ಲಿ, ಇದಕ್ಕೆ ವೆಚ್ಚವಾದ ಹಣವೆಷ್ಟು; (ಸಂಪೂರ್ಣ ವಿವರ ನೀಡುವುದು)	ಈ ಸಂಬಂಧ ರೂ. 3.55 ಕೋಟಿಗಳನ್ನು ವಿವಿಧ ಹಂತದ ತರಬೇತಿಗಳಿಗೆ ವೆಚ್ಚ ಮಾಡಲಾಗಿರುತ್ತದೆ. ಇದರಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮ ಪಂಚಾಯಿತಿಗಳ ನೋಡಲ್ ಅಧಿಕಾರಿಗಳು, ಮೇಲ್ವಿಚಾರಣಾಧಿಕಾರಿಗಳು ಸೇರಿದಂತೆ ಒಟ್ಟು 1,14,024 ಸಿಬ್ಬಂದಿಗಳಿಗೆ ತರಬೇತಿ ನೀಡಲಾಗಿರುತ್ತದೆ.
(ಇ)	ಪ್ರಸಕ್ತ ಸಾಲಿನಲ್ಲಿ ರಾಜ್ಯದ ವಿವಿಧ ಗ್ರಾಮಾಭಿವೃದ್ಧಿ ಯೋಜನೆಗಳಿಗೆ ಮೀಸಲಿಟ್ಟ ಹಾಗೂ ಖರ್ಚಾದ ಹಣವೆಷ್ಟು; ಎಷ್ಟು ಪ್ರಗತಿ ಸಾಧಿಸಲಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)	ಪ್ರಸಕ್ತ ಸಾಲಿನಲ್ಲಿ ರಾಜ್ಯದ ವಿವಿಧ ಗ್ರಾಮಾಭಿವೃದ್ಧಿ ಯೋಜನೆಗಳಿಗೆ ರೂ.717778 ಲಕ್ಷಗಳನ್ನು ಮೀಸಲಿಡಲಾಗಿದ್ದು, ರೂ.859344 ಲಕ್ಷಗಳು ಖರ್ಚಾಗಿರುತ್ತದೆ.
(ಈ)	ಪ್ರಸಕ್ತ ಸಾಲಿನಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ ರಾಜ್ಯದ ಎಷ್ಟು ಗ್ರಾಮಗಳು ನಿಗದಿತ ಗುರಿ ಪೂರೈಸಿವೆ; ಉದ್ಯೋಗ ಖಾತ್ರಿ ಯೋಜನೆಯಡಿ ಎಷ್ಟು ಮೊತ್ತದ ಕಾಮಗಾರಿಗಳು ಪೂರ್ಣಗೊಂಡಿವೆ; (ಅಂಕಿ ಅಂಶ ಸಹಿತ ಮಾಹಿತಿ ನೀಡುವುದು)	ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯು ಬೇಡಿಕೆ ಆಧಾರಿತ ಯೋಜನೆ ಆಗಿರುತ್ತದೆ. ಪ್ರಸಕ್ತ ಸಾಲಿನಲ್ಲಿ ಮಹಾತ್ಮ ಗಾಂಧಿ ಉದ್ಯೋಗ ಖಾತ್ರಿ ಯೋಜನೆಯಡಿ 6013 ಗ್ರಾಮ ಪಂಚಾಯಿತಿಗಳಲ್ಲಿ ಶೇ.94.67ರಷ್ಟು ಪ್ರಗತಿ ಸಾಧಿಸಲಾಗಿದೆ. ಸದರಿ ಯೋಜನೆಯಡಿ ರೂ.381315 ಲಕ್ಷ ಮೊತ್ತದ ಕಾಮಗಾರಿಗಳು ಪೂರ್ಣಗೊಂಡಿವೆ.

(ಉ)	ವಲಸೆ ಕೂಲಿ ಕಾರ್ಮಿಕರಿಗೆ ಉದ್ಯೋಗ ಖಾತ್ರಿ ಯೋಜನೆಯಡಿ ಕೆಲಸ ನೀಡಬೇಕೆನ್ನುವ ಆದೇಶದ ಅನ್ವಯ ಎಷ್ಟು ವಲಸಿಗ ಕೂಲಿ ಕಾರ್ಮಿಕರಿಗೆ ಕೆಲಸ ನೀಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)	ಉದ್ಯೋಗ ಖಾತ್ರಿ ಯೋಜನೆಯಡಿ ಒಟ್ಟು 133478986 ಮಾನವ ದಿನಗಳನ್ನು ಸೃಜಿಸಲಾಗಿದೆ.

ಸಂಖ್ಯೆ:ಗ್ರಾಅಪಂರಾ 107 ಜಿಪಸ 2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು.

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು